ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ. ನ್ಯಾಯಾಲಯ,
ಚಿಕ್ಕಮಗಳೂರು.
ಎಂ.ವಿ.ಸಿ ನಂ.123/2025

| | | |
|---|---|---|
| ಸಾಕ್ಷಿದಾರರ ಹೆಸರು | ಸಿದ್ದರಾಜು | ಸಿ.ಡಬ್ಲ್ಯೂ.1 |
| ತಂದೆಯ ಹೆಸರು | ಲೇಟ್ ಪುಟ್ಟಸಿದ್ದಯ್ಯ | |
| ವಯಸ್ಸು | 35 ವರ್ಷ | |
| ವೃತ್ತಿ | ಬಾರ್ಬರ್ | |
| ವಾಸ | ಅಂಬಳೆ | |

ದಿನಾಂಕಃ 05-12-2025 ರಂದು ಪ್ರಮಾಣ ವಚನ ಭೋದಿಸಲಾಯಿತು.

ಮಧ್ಯಂತರ ಅರ್ಜಿ ಸಂಖ್ಯೆ: 1 ರ ಮೇಲೆ ಮುಖ್ಯ ವಿಚಾರಣೆಃ ಅರ್ಜಿದಾರ ಪರ ವಕೀಲರಿಂದಃ-

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದು.

ಪಾಟೀ ಸವಾಲುಃ 3 ನೇ ಎದುರುದಾರ ಪರ ವಕೀಲರಿಂದಃ-

ಅಪಘಾತದ ನಂತರ ನನ್ನ ಮಗನನ್ನು ನಾನೇ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. ಅಪಘಾತದ ಬಗ್ಗೆ ದೂರನ್ನು ನಾನೇ ನೀಡಿರುತ್ತೇನೆ. ಅಪಘಾತದ ಬಗ್ಗೆ ಪೊಲೀಸರಿಗೆ ನಾನೇ ಮಾಹಿತಿಯನ್ನು ನೀಡಿರುತ್ತೇನೆ. ಅಂತಿಮ ವರದಿಯನ್ನು ದಿಃ13.04.2023 ರಂದು ಸಲ್ಲಿಸಿರುವ ಬಗ್ಗೆ ನನಗೆ ಮಾಹಿತಿ ಇರುತ್ತದೆ ಎಂದರೆ ಸರಿ. ಸದರಿ ಅಪಘಾತದ ಬಾಬ್ತು ಕ್ರಿಮಿನಲ್ ಪ್ರಕರಣದಲ್ಲಿ ನಾನು ಸಾಕ್ಷಿಯನ್ನು ನೀಡಿರುತ್ತೇನೆ ಎಂದರೆ ಸರಿ. ಆ ಕೂಡಲೇ

ನನಗೆ ಅರ್ಜಿಯನ್ನು ಸಲ್ಲಿಸಲು ಯಾವುದೇ ತೊಂದರೆ ಇರಲಿಲ್ಲ ಎಂದರೆ ಸಾಕ್ಷಿದಾರರು ನನ್ನ ಮಗನಿಗೆ ಚಿಕಿತ್ಸೆಯನ್ನು ನೀಡುತ್ತಿದ್ದ ಕಾರಣ ಕೂಡಲೇ ಅರ್ಜಿಯನ್ನು ಸಲ್ಲಿಸಲು ಆಗುವುದಿಲ್ಲ ಎಂದು ನುಡಿಯುತ್ತಾರೆ. ನನ್ನ ಮಗನು 1 ವರ್ಷ 6 ತಿಂಗಳು ಚಿಕಿತ್ಸೆಯನ್ನು ಪಡೆದಿದ್ದ ಎಂದು ತೋರಿಸಲು ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಾನು ಅಂತಹ ಯಾವುದೇ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ 6 ತಿಂಗಳ ಒಳಗೆ ಅರ್ಜಿಯನ್ನು ಸಲ್ಲಿಸಲು ನನಗೆ ಯಾವುದೇ ತೊಂದರೆ ಇರಲಿಲ್ಲ ಎಂದರೆ ಸರಿಯಲ್ಲ.

ನಾನು 7 ನೇ ತರಗತಿಯವರೆಗೆ ಓದಿರುತ್ತೇನೆ. ನನಗೆ ವ್ಯವಹಾರ ಜ್ಞಾನ ಇರುತ್ತದೆ ಎಂದರೆ ಸರಿ. ನನ್ನ ಮಗ ಒಳರೋಗಿಯಾಗಿ ದಾಖಲಾಗಿದ್ದ ಸಮಯದಲ್ಲಿ ನನ್ನ ತಾಯಿ ಹಾಗೂ ನನ್ನ ಹೆಂಡತಿ ಆತನನ್ನು ನೋಡಿಕೊಳ್ಳುತ್ತಿದ್ದರು. ಆದ್ದರಿಂದ, ನನಗೆ ಈ ಅರ್ಜಿಯನ್ನು ಅವಧಿಯ ಒಳಗೆ ಸಲ್ಲಿಸಲು ಯಾವುದೇ ತೊಂದರೆ ಇಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ವಿಳಂಬವಾಗಿ ಅರ್ಜಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ದಾಖಲೆಯನ್ನು ಹಾಜರುಪಡಿಸದೇ ಇದ್ದರೂ ಕೂಡಾ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ 1 ಮತ್ತು 2 ನೇ ಎದುರುದಾರರು ಏಕಪಕ್ಷೀಯ.</u>

MVC No.123/2025
CW-1

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ,ಚಿಕ್ಕಮಗಳೂರು.

ಎಸ್ಆರ್ಃ

MVC No.123/2025
CW-1